# ಕೃಷಿ ವಿಶ್ವ ವಿದ್ಯಾನಿಲಯ
# ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
## ಜಿ.ಕೆ.ವಿ.ಕೆ., ಬೆಂಗಳೂರು–560065
## * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *


**ದಿನಾಂಕ: 04.02.2020**

### ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ
### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
### (ದಿನಾಂಕ 05-02-2020 - 09-02-2020 ವರೆಗೆ)

| | 05.02.20 | 06.02.20 | 07.02.20 | 08.02.20 | 09.02.20 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ.) | 30 | 30 | 30 | 30 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 18 | 18 | 19 | 19 | 18 |
| ಮೋಡ ( ಪ್ರಮಾಣ) | 2 | 2 | 2 | 2 | 3 |
| ಅರ್ದ್ರತೆ ೭.೨೦ ಬೆ (ಶೇ) | 90 | 87 | 87 | 84 | 87 |
| ಅರ್ದ್ರತೆ ೨.೨೦ ಮ (ಶೇ) | 60 | 60 | 60 | 63 | 63 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 4 | 3 | 3 | 4 |
| ಗಾಳಿಯ ದಿಕ್ಕು ( ಡಿಗ್ರಿ) | 90 | 88 | 87 | 88 | 90 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಂಭವ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ **29.0-30.0$^{o}$ C** ಮತ್ತು ಕನಿಷ್ಠ **18.0-19.0$^{o}$C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **84-90 %** ಇದ್ದು ಮಧ್ಯಾಹ್ನ **60-63 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3-5** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಕೊಯ್ಲು ಮಾಡಿದ ರಾಗಿ, ಜೋಳ ಇನ್ನಿತರ ಧಾನ್ಯಗಳನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ, ಒಕ್ಕಣೆ ಮಾಡಿ ಶುಚಿಗೊಳಿಸಿ ಚೀಲಗಳಲ್ಲಿ ಶೇಖರಣೆ ಮಾಡುವುದು.<br>➢ ದ್ವಿದಳಧಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ತೊಗರಿ | ➢ ತೊಗರಿ ಕಟಾವನ್ನು ಮುಂದುವರಿಸಿ ಮತ್ತು ಕಟಾವಾದ ತೊಗರಿಯನ್ನು ಬಿಸಿಲಿನಲ್ಲಿ ಒಣಗಿಸಿ ಸಿಪ್ಪೆಯಿಂದ ಬೇರ್ಪಡಿಸಿ ಒಕ್ಕಣೆ ಮಾಡಿ ಚೀಲದಲ್ಲಿ ಶೇಖರಿಸಿ. |
| ಮಾವು | ➢ ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>➢ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |
| | **ಹೈನುಗಾರಿಕೆ** |
| ರೇಷ್ಮೆ ಸಾಕಾಣಿಕೆ | ➢ ಚಾಕಿ ಸಾಕಾಣಿಕೆಗೆ ಬೇಕಾದ ವಾತಾವರಣ: ಚಾಕಿ ಹುಳುಗಳು ಸಂಪೂರ್ಣ ರೋಗರಹಿತ ವಾತಾವರಣದಲ್ಲಿ ಸಾಕಾಣಿಕೆ ಮಾಡಬೇಕು. ಇವುಗಳು ಅಧಿಕ ಉಷ್ಣಾಂಶ (27-28$^{o}$ ಸೆಂ) ಮತ್ತು ತೇವಾಂಶದ ( 85-90 % RH) ಪ್ರದೇಶದಲ್ಲಿ ಆರೋಗ್ಯವಾಗಿ ಬೆಳೆಯುತ್ತವೆ.<br>➢ **ಸುಣ್ಣ ಕಟ್ಟು ರೋಗ:** ಈ ರೋಗವು ಸಾಮಾನ್ಯವಾಗಿ ಮಳೆಗಾಲ ಮತ್ತು ಚಳಿಗಾಲದಲ್ಲಿ ಕೆಲವು ಶಿಲೀಂಧ್ರಗಳ ಸೋಂಕಿನಿಂದ (ಬ್ಯುವೇರಿಯಾ ಬ್ಯಾಸಿಯಾನಾ) ಬರುತ್ತದೆ.<br>➢ ರೋಗವನ್ನು ಯಶಸ್ವಿಯಾಗಿ ನಿಯಂತ್ರಿಸಬೇಕಾದರೆ ಉಷ್ಣಾಂಶ ಮತ್ತು ತೇವಾಂಶವನ್ನು ಶಿಫಾರಸ್ಸು ಮಾಡಿದ ರೀತಿಯಲ್ಲಿ ಕಾಪಾಡಬೇಕು.<br>➢ ಜ್ವರಕ್ಕೆ ಕೂತಾಗ ಹಾಸಿಗೆಯನ್ನು ಲಘುವಾಗಿ ಹರಿದು ಸುಣ್ಣದ ಪುಡಿಯನ್ನು (5-6 ಗ್ರಾಂ/ಚದರ ಅಡಿಗೆ) ಧೂಳೀಕರಿಸುವುದನ್ನು ಮರೆಯಬಾರದು.<br>➢ ರೇಷ್ಮೆ ಸಾಕಾಣಿಕಾ ಘಟಕದಲ್ಲಿ ಕನಿಷ್ಠ ಉಷ್ಣಾಂಶವು 22$^{o}$ ಸೆ. ಗಿಂತ ಕಡಿಮೆಯಾದಲ್ಲಿ ರೂಮ್ ಹೀಟರ್‌ಗಳ ಮುಖಾಂತರ |

| | |
|---|---|
| | ಸ್ಥಿರತೆಯನ್ನು ಕಾಪಾಡುವ್ವದು ಅವಶ್ಯಕ.<br>➢ ಕಾಲಕಾಲಕ್ಕೆ ಹಾಸಿಗೆ ಸೋಂಕು ನಿವಾರಕಗಳಾದ ಸುರಕ್ಷ, ವಿಜೇತ, ಅಂಕುಶ್, ಸಂರಕ್ಷಕ ಮುಂತಾದ ಔಷಧಿಗಳನ್ನು ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಧೂಳೀಕರಿಸುತ್ತಿರಬೇಕು ಮತ್ತು ರೋಗ ಕಾಣಿಸಿಕೊಂಡಾಗ ಹತೋಟಿ ಬರುವವರೆಗೂ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಸೋಂಕು ನಿವಾರಕಗಳನ್ನು ಬಳಸಬೇಕು. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**